**All India Radio: Bangalore**
**National Bulletin In Kannada**
**05.05.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><><><>

ಮುಖ್ಯಾಂಶಗಳು

1. ಭಾರತವನ್ನು ಕ್ರೀಡಾಶಕ್ತಿ ಕೇಂದ್ರವಾಗಿಸಲು ಕೇಂದ್ರ ಸರ್ಕಾರ ಬದ್ಧ - ಪ್ರಧಾನಿ ನರೇಂದ್ರ ಮೋದಿ
2. ಕರ್ನಾಟಕಕ್ಕೆ ಇಂದು ಭೇಟಿ ನೀಡಲಿರುವ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್
3. ನವದೆಹಲಿಯಲ್ಲಿಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಜಪಾನ್ ಸಹವರ್ತಿಯೊಂದಿಗೆ ಸಭೆ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್‌ಗೆ ೩೭ ರನ್ ಜಯ

<><><><>

೨೦೩೬ ರ ಒಲಿಂಪಿಕ್ಸ್‌ಗೆ ಮುಂಚಿತವಾಗಿ ಭಾರತವನ್ನು ಕ್ರೀಡಾ ಶಕ್ತಿ ಕೇಂದ್ರವಾಗಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. 'ಖೇಲೋ ಇಂಡಿಯಾ ಯುವ ಕ್ರೀಡಾಕೂಟ- ೨೦೨೫' ಕಾರ್ಯಕ್ರಮವನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿದ ಅವರು, ಕಳೆದ ದಶಕದಲ್ಲಿ ತಮ್ಮ ಸರ್ಕಾರ ಕ್ರೀಡಾ ಆಯವ್ಯಯವನ್ನು ಮೂರು ಪಟ್ಟು ಹೆಚ್ಚಿಸಿದೆ ಹಾಗೂ ಈ ವರ್ಷ ೪ ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ ಎಂದು ಹೇಳಿದರು. ತಮ್ಮ ಸರ್ಕಾರ ಕ್ರೀಡೆಗಳನ್ನು ಉತ್ತೇಜಿಸಲು ಮತ್ತು ಮೂಲಸೌಕರ್ಯವನ್ನು ಸುಧಾರಿಸಲು ಅನೇಕ ಕ್ರಮಗಳನ್ನು ಕೈಗೊಂಡಿದ್ದು, ಈಗ ವರ್ಷಪೂರ್ತಿ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ, ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಕ್ರೀಡೆಗಳನ್ನು ಮುಖ್ಯವಾಹಿನಿಯ ಅಧ್ಯಯನದ ಭಾಗವನ್ನಾಗಿ ಮಾಡುವ ಮೂಲಕ ಆದ್ಯತೆ ನೀಡಲಾಗಿದೆ ಎಂದು ಹೇಳಿದರು. ವಿಶ್ವವಿದ್ಯಾಲಯದ ಕ್ರೀಡಾಕೂಟಗಳು, ಯುವ ಕ್ರೀಡಾಕೂಟಗಳು, ಚಳಿಗಾಲದ ಕ್ರೀಡಾಕೂಟಗಳು ಅಥವಾ ಪ್ಯಾರಾ-ಗೇಮ್ಸ್‌ಗಳು ಸೇರಿದಂತೆ ಕ್ರೀಡಾಪಟುಗಳನ್ನು ಹೊಸ ರೀತಿಯ ಕ್ರೀಡೆಗಳಲ್ಲಿ ಪಾಲ್ಗೊಳ್ಳುವಂತೆ ಮಾಡಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ಹೇಳಿದರು. ಬಿಹಾರದಲ್ಲಿ ಸೌಲಭ್ಯಗಳನ್ನು

ಸುಧಾರಿಸುವ ಅಗತ್ಯವನ್ನು  ಒತ್ತಿ ಹೇಳಿದ ಅವರು, ಈ ನಿಟ್ಟಿನಲ್ಲಿ ಪಾಟ್ನಾ-ಗಯಾ ಹೆದ್ದಾರಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿರುವ ಕ್ರೀಡಾ ನಗರವನ್ನು ಉಲ್ಲೇಖಿಸಿದರು.

ಧ್ವನಿ - ಪ್ರಧಾನಿ ನರೇಂದ್ರ ಮೋದಿ (೨೨ ಸೆಕೆಂಡ್ಸ್)

ಕ್ರೀಡಾ ಆರ್ಥಿಕತೆಯು, ಕೇವಲ ಕ್ರೀಡಾಂಗಣಕ್ಕೆ ಸೀಮಿತವಾಗಿಲ್ಲ, ನೂರಾರು ಉದ್ಯೋಗಗಳನ್ನು ಸೃಷ್ಟಿಸುತ್ತದೆ ಮತ್ತು ಉದ್ಯೋಗಕ್ಕಾಗಿ ಹೊಸ ಮಾರ್ಗಗಳನ್ನು ತೆರೆಯುತ್ತದೆ ಎಂದು ಪ್ರಧಾನಿ ನುಡಿದರು. ಕ್ರೀಡಾ ಉದ್ಯಮಶೀಲತೆ, ಭೌತಚಿಕಿತ್ಸೆ, ದತ್ತಾಂಶ ವಿಶ್ಲೇಷಣೆ, ಕ್ರೀಡಾ ತಂತ್ರಜ್ಞಾನ, ಇ-ಕ್ರೀಡೆಗಳು, ಕ್ರೀಡಾ ಮಾಧ್ಯಮ ಮತ್ತು ಕಾರ್ಯಕ್ರಮ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಕ್ರೀಡೆಗಳು ಹೊಸ ಮಾರ್ಗಗಳನ್ನು ತೆರೆಯುತ್ತವೆ ಎಂದು ಪ್ರಧಾನಿ ಹೇಳಿದರು. ೧೮ ವರ್ಷದೊಳಗಿನ ಆಟಗಾರರಿಗಾಗಿ ದೊಡ್ಡ ವೇದಿಕೆ- 'ಖೇಲೋ ಇಂಡಿಯಾ ಯೂತ್ ಗೇಮ್ಸ್ -೨೦೨೫' ನಿನ್ನೆ ಬಿಹಾರದ ಪಾಟ್ನಾದಲ್ಲಿ ವರ್ಣರಂಜಿತ ಮತ್ತು ಭವ್ಯ ಆಚರಣೆಗಳೊಂದಿಗೆ ಪ್ರಾರಂಭವಾಯಿತು. ಬಾಲಕಿಯರು ಮತ್ತು ಬಾಲಕರ ವಿಭಾಗಗಳ ೮ ಸಾವಿರದ ೫೦೦ ಕ್ಕೂ ಹೆಚ್ಚು ಯುವ ಕ್ರೀಡಾ ಪ್ರತಿಭೆಗಳು ವಿವಿಧ ಸ್ಪರ್ಧೆಗಳಲ್ಲಿ ೨ ಸಾವಿರದ ೪೦೦ ಕ್ಕೂ ಹೆಚ್ಚು ಪದಕಗಳಿಗಾಗಿ ಸ್ಪರ್ಧಿಸುತ್ತಿದ್ದಾರೆ. ಪಾಟ್ನಾ, ರಾಜಗೀರ್, ಗಯಾ, ಭಾಗಲ್ಪುರ್ ಮತ್ತು ಬೇಗುಸರಾಯ್ ಸೇರಿದಂತೆ ಆರು ನಗರಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ನವದೆಹಲಿಯಲ್ಲಿ ಸೈಕ್ಲಿಂಗ್, ಶೂಟಿಂಗ್ ಮತ್ತು ಅಥ್ಲೆಟಿಕ್ಸ್‌ನ ಮೂರು ರೀತಿಯ ಸ್ಪರ್ಧೆಗಳು ಜರುಗಲಿವೆ.

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಕರ್ನಾಟಕಕ್ಕೆ ಆಗಮಿಸಲಿದ್ದಾರೆ.  ತಮ್ಮ ಪ್ರವಾಸದ ವೇಳೆ ಅವರು, ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿರುವ ಅರಣ್ಯ ಕಾಲೇಜಿಗೆ ಭೇಟಿ ನೀಡಲಿದ್ದು, ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡುವ ನಿರೀಕ್ಷೆಯಿದೆ. ಈ ವೇಳೆ ಬಿಜೆಪಿಯ ಹಲವು ಮುಖಂಡರು ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದಾರೆ.

<><><><>

ರಕ್ಷಣಾ ಸಚಿವರಾಗಿ ಸಶಸ್ತ್ರ ಪಡೆಗಳೊಂದಿಗೆ ಕೆಲಸ ಮಾಡುವುದು ಮತ್ತು ಭಾರತದ ಮೇಲೆ ಕೆಟ್ಟ ದೃಷ್ಟಿ ಬೀರುವವರಿಗೆ ಸೂಕ್ತ ಉತ್ತರ ನೀಡುವುದು ತಮ್ಮ ಜವಾಬ್ದಾರಿ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಸಂಸ್ಕೃತಿ ಜಾಗರಣ್

ಮಹೋತ್ಸವವನ್ನು ಉದ್ದೇಶಿಸಿ ಮಾತನಾಡಿದ ಅವರು, ಸೈನಿಕರೊಂದಿಗೆ ದೇಶದ ಗಡಿಗಳ ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು ತಮ್ಮ ಕರ್ತವ್ಯವಾಗಿದೆ. ಇಂದು ಇಡೀ ಜಗತ್ತು ಭಾರತವನ್ನು ಗುರುತಿಸಿದ್ದು, ಜಾಗತಿಕ ವೇದಿಕೆಗಳಲ್ಲಿ ಭಾರತದ ದೃಷ್ಟಿ ಕೋನವನ್ನು ಪರಿಗಣಿಸುತ್ತಿದೆ. ಈ ಮೊದಲು ೧೧ನೇ ಸ್ಥಾನದಲ್ಲಿದ್ದ ಭಾರತದ ಆರ್ಥಿಕತೆ ಇಂದು ೫ನೇ ಅತಿದೊಡ್ಡ ಆರ್ಥಿಕತೆಯಾಗಿ ಬೆಳೆದಿದ್ದು ೩ನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿ ಮುನ್ನಡೆದಿದೆ. ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲು ಆರ್ಥಿಕವಾಗಿ ಮಾತ್ರವಲ್ಲದೇ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕವಾಗಿಯೂ ಸಬಲೀಕರಣಗೊಳ್ಳಬೇಕು ಎಂದರು.

ಧ್ವನಿ : ರಾಜನಾಥ್ ಸಿಂಗ್ (೨೮ ಸೆಕೆಂಡ್‌ಗಳು)

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿಂದು ಜಪಾನ್ ರಕ್ಷಣಾ ಸಚಿವ ಜನರಲ್ ನಕತಾನಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಉಭಯ ನಾಯಕರು ಪ್ರಸ್ತುತ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಭದ್ರತಾ ಪರಿಸ್ಥಿತಿಯ ಕುರಿತು ಅಭಿಪ್ರಾಯಗಳು ಮತ್ತು ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ. ಇದೇ ವೇಳೆ ಅವರು, ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭಾರತ ಮತ್ತು ಜಪಾನ್ ದೀರ್ಘಾವಧಿಯ ಸ್ನೇಹ -ಸಂಬಂಧವನ್ನು ಹಂಚಿಕೊಂಡಿವೆ. ೨೦೧೪ ರ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯ ಉನ್ನತೀಕರಣದ ನಂತರ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಮತ್ತಷ್ಟು ವೇಗವಾಗಿ ಬೆಳೆದಿದೆ. ರಕ್ಷಣೆ ಮತ್ತು ಭದ್ರತೆ ಎರಡೂ ರಾಷ್ಟ್ರಗಳ ನಡುವಿನ ಸಂಬಂಧಗಳ ಪ್ರಮುಖ ಸ್ತಂಭಗಳಾಗಿವೆ. ಕಳೆದ ವರ್ಷ ನವೆಂಬರ್‌ನಲ್ಲಿ ಆಸಿಯಾನ್ ರಕ್ಷಣಾ ಸಚಿವರ ಸಭೆ-ಪ್ಲಸ್‌ನ ಸಂದರ್ಭದಲ್ಲಿ ಅವರ ಮೊದಲ ಸಂವಾದದ ನಂತರ, ಆರು ತಿಂಗಳೊಳಗೆ ಇಬ್ಬರು ರಕ್ಷಣಾ ಸಚಿವರ ನಡುವಿನ ಎರಡನೇ ಸಭೆ ಇದಾಗಿದೆ.

<><><><>

ಅಭಿವೃದ್ಧಿ ಹೊಂದಿದ ಭಾರತದ ಹಾದಿಯು ಕೃಷಿ ಕ್ಷೇತ್ರದ ಮೇಲೆ ಅವಲಂಬಿತವಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ಮಧ್ಯಪ್ರದೇಶದ ಗ್ವಾಲಿಯರ್‌ನಲ್ಲಿರುವ ರಾಜಮಾತಾ ವಿಜಯರಾಜೆ ಸಿಂಧಿಯಾ ಕೃಷಿ ವಿಶ್ವವಿದ್ಯಾಲಯದಲ್ಲಿ ನಿನ್ನೆ ವಿದ್ಯಾರ್ಥಿಗಳು ಮತ್ತು

ಪ್ರಾಧ್ಯಾಪಕರ ಸಂವಾದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ರೈತರ ಜೀವನದಲ್ಲಿ ಬದಲಾವಣೆ ಮತ್ತು ಸಮೃದ್ಧಿಯನ್ನು ತರಲು ಕೊಡುಗೆ ನೀಡುವುದು ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡುವ ಸಂಸ್ಥೆಗಳು ಮತ್ತು ಕೃಷಿ ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ ಎಂದರು. ರೈತರು ಬೆಳೆ ಉತ್ಪಾದಕರಾಗಿ ಮಾತ್ರ ಉಳಿಯದೆ, ಕೃಷಿ-ಪ್ರೇಮಿಗಳಾಗುವಂತೆ ಮಾಡುವ ಪ್ರಯತ್ನಗಳು ಇರಬೇಕು ಎಂದ ಅವರು, ತಂತ್ರಜ್ಞಾನ ಮತ್ತು ಸಂಶೋಧನೆಯನ್ನು ಬಳಸಿಕೊಂಡು, ಕೃಷಿ ಕ್ಷೇತ್ರದಲ್ಲಿ ಬದಲಾವಣೆಯ ಹರಿಕಾರರಾಗುವಂತೆ ಕೃಷಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ರಾಜ್ಯಪಾಲ ಮಂಗುಭಾಯಿ ಪಟೇಲ್, ಮುಖ್ಯಮಂತ್ರಿ ಡಾ. ಮೋಹನ್ ಯಾದವ್, ಈಶಾನ್ಯ ಪ್ರದೇಶದ ಕೇಂದ್ರ ಸಂವಹನ ಮತ್ತು ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅರವಿಂದ್ ಕುಮಾರ್ ಶುಕ್ಲಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><><>

ಏಷ್ಯನ್ ಅಭಿವೃದ್ಧಿ ಬ್ಯಾಂಕ್- ಎಡಿಬಿ ಆಡಳಿತ ಮಂಡಳಿಯ ೫೮ ನೇ ವಾರ್ಷಿಕ ಸಭೆ ಇಟಲಿಯ ಮಿಲನ್‌ನಲ್ಲಿ ನಿನ್ನೆ ಪ್ರಾರಂಭವಾಗಿದೆ. ನಾಲ್ಕು ದಿನಗಳ ಈ ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದಾರೆ. ಸಭೆಯಲ್ಲಿ ಎಡಿಬಿ ಆಡಳಿತ ಮಂಡಳಿಯ ಅಧಿಕೃತ ನಿಯೋಗಗಳು, ಸದಸ್ಯರು ಮತ್ತು ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆಗಳ ಅಧಿಕೃತ ನಿಯೋಗಗಳು ಭಾಗವಹಿಸಲಿವೆ ಎಂದು ಹಣಕಾಸು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಹಣಕಾಸು ಸಚಿವರು, ವಾರ್ಷಿಕ ಸಭೆಯ ಕೇಂದ್ರ ಕಾರ್ಯಕ್ರಮಗಳಾದ ಗವರ್ನರ್‌ಗಳ ವ್ಯವಹಾರ ಅಧಿವೇಶನ, ಗವರ್ನರ್‌ಗಳ ಸಮಗ್ರ ಅಧಿವೇಶನ ಮತ್ತು 'ಭವಿಷ್ಯದ ಸ್ಥಿತಿಸ್ಥಾಪಕತ್ವಕ್ಕಾಗಿ ಗಡಿಯಾಚೆಗಿನ ಸಹಯೋಗ' ಕುರಿತ ವಿಚಾರ ಸಂಕಿರಣದಲ್ಲಿ ಭಾಗವಹಿಸಲಿದ್ದಾರೆ. ಇದೇ ವೇಳೆ ಸಚಿವರು, ಅಂತಾರಾಷ್ಟ್ರೀಯ ನಿಧಿಯ ಅಧ್ಯಕ್ಷರು ಮತ್ತು ಬ್ಯಾಂಕ್‌ನ ಗವರ್ನರ್‌ರೊಂದಿಗಿನ ಸಭೆಗಳ ಜೊತೆಗೆ, ಇಟಲಿ, ಜಪಾನ್ ಮತ್ತು ಭೂತಾನ್‌ನ ಹಣಕಾಸು ಸಚಿವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಮಿಲನ್‌ನಲ್ಲಿರುವ ಭಾರತೀಯ ವಲಸಿಗರೊಂದಿಗೆ ನಿರ್ಮಲಾ ಸೀತಾರಾಮನ್ ಸಂವಾದ ನಡೆಸಲಿದ್ದಾರೆ. ವ್ಯಾಪಾರ ಮುಖಂಡರು ಮತ್ತು ಸಿಇಒಗಳನ್ನು ಭೇಟಿ ಮಾಡಲಿದ್ದಾರೆ. ಅಲ್ಲದೇ, ಬೊಕೊನಿ ವಿಶ್ವವಿದ್ಯಾಲಯದಲ್ಲಿ 'ಆರ್ಥಿಕ

ಮತ್ತು ಹವಾಮಾನ ಸ್ಥಿತಿಸ್ಥಾಪಕತ್ವವನ್ನು ಸಮತೋಲನಗೊಳಿಸುವುದು' ಕುರಿತ ನೆಕ್ಸ್ಟ್ ಮಿಲನ್ ವೇದಿಕೆಯ ಅಧಿವೇಶನದಲ್ಲಿ ಸಚಿವರು ಭಾಗವಹಿಸಲಿದ್ದಾರೆ.

<><><>

ತೆಲಂಗಾಣದಲ್ಲಿ ಈ ತಿಂಗಳು ನಡೆಯಲಿರುವ ವಿಶ್ವಸುಂದರಿ ಸ್ಪರ್ಧೆಗೆ ಜಗತ್ತಿನಾದ್ಯಂತದ ಸ್ಪರ್ಧಿಗಳು ಹೈದರಾಬಾದ್‌ಗೆ ಆಗಮಿಸುತ್ತಿದ್ದಾರೆ. ಹೈದರಾಬಾದ್‌ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿನ್ನೆ, ಕೆನಡಾದ ಎಮ್ಮಾಡೀನಾ ಕ್ಯಾಥರಿನ್ ಮಾರಿಸನ್ ಮತ್ತು ಬ್ರೆಜಿಲ್‌ನ ಜೆಸ್ಸಿಕಾ ಸ್ಕ್ಯಾಂಡಿಯುಝಿ ಪೆಡ್ರೊಸೊ ಅವರನ್ನು ಅಧಿಕಾರಿಗಳು ಸ್ವಾಗತಿಸಿದರು. ಇದಕ್ಕೂ ಮುನ್ನ, ಮಿಸ್ ವರ್ಲ್ಡ್ ಅಧಿಕಾರಿ ಜೋನಾಥನ್ ಮಾರ್ಕ್ ಶಾ ಆಗಮಿಸಿದರು. ೧೨೦ ದೇಶಗಳ ಸ್ಪರ್ಧಿಗಳು, ಮುಂದಿನ ಎರಡು ದಿನಗಳಲ್ಲಿ ಹೈದರಾಬಾದ್ ತಲುಪಲಿದ್ದಾರೆ. ೭೨ ನೇ ಮಿಸ್‌ವರ್ಲ್ಡ್ ಸ್ಪರ್ಧೆ, ಈ ತಿಂಗಳ ೧೦ ರಿಂದ ೩೧ ರವರೆಗೆ ತೆಲಂಗಾಣದಲ್ಲಿ ನಡೆಯಲಿದೆ.

<><><>

ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ, ಲಖನೌ ಸೂಪರ್ ಜೈಂಟ್ಸ್ ತಂಡದ ವಿರುದ್ಧ ೩೭ ರನ್ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ, ಪಂಜಾಬ್ ಕಿಂಗ್ಸ್ ತಂಡ ಅಂಕ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೆ ಏರಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್, ನಿಗದಿತ ೨೦ ಓವರ್‌ಗಳಲ್ಲಿ ಐದು ವಿಕೆಟ್ ನಷ್ಟಕ್ಕೆ ೨೩೬ ರನ್‌ಗಳ ಬೃಹತ್ ಮೊತ್ತ ಗಳಿಸಿತು. ೨೩೭ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಲಕ್ನೋ ಸೂಪರ್ ಜೈಂಟ್ಸ್ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್‌ಗಳಿಗೆ ೧೯೯ ರನ್ ಗಳಿಲಷ್ಟೇ ಶಕ್ತವಾಯಿತು.  ನಿನ್ನೆ ಈಡನ್ ಗಾರ್ಡನ್ಸ್‌ನಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ, ಕೋಲ್ಕತ್ತಾ ನೈಟ್ ರೈಡರ್ಸ್ ತಂಡ, ರಾಜಸ್ಥಾನ್ ರಾಯಲ್ಸ್ ತಂಡವನ್ನು ಕೇವಲ ಒಂದು ರನ್‌ನಿಂದ ಸೋಲಿಸುವಲ್ಲಿ ಯಶಸ್ವಿಯಾಯಿತು. ಇಂದು ಹೈದರಾಬಾದ್‌ನಲ್ಲಿ ನಡೆಯಲಿರುವ ಪಂದ್ಯದಲ್ಲಿ, ಸನ್‌ರೈಸರ್ಸ್ ಹೈದರಾಬಾದ್, ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>